ಶ್ರೀ ಪಿ. ಜಿ. ಆರ್. ಸಿಂಧ್ಯ (ಸಾರಿಗೆ ಮಂತ್ರಿಗಳು).—

೧) ಹೌದು. ನಂದನಗೂಡು-ತಾಳ್ಳೂರಿಕೆಸಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಸಾರಿಗೆಗಳನ್ನು ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುವುದು.

೨) ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಹಾಲೀ ಸಾರಿಗೆಗಳಲ್ಲದೆ ಮಿನಿ ಬಸ್ಸುಗಳ ಪರವಾನಗಿ ಮಾರ್ಗಸೂಚಿಯನ್ನು ಪ್ರಾರಂಭಿಸಲಾಗುವುದು.

೩) ಶೀಘ್ರದಲ್ಲಿಯೇ ಸೌಕರ್ಯ ಒದಗಿಸಲಾಗುವುದು.

ಬಿಜಾಪುರ ಜಿಲ್ಲೆಯಲ್ಲಿರುವ ನ್ಯಾಯ ಬೆಲೆ ಅಂಗಡಿಗಳು.

೧೫೫೫. ಶ್ರೀ ಬಿ. ಜಿ ಜವಳಿ.—ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬಿಜಾಪುರ ಜಿಲ್ಲೆಯಲ್ಲಿರುವ ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು ?

ಆ) ಆ ಪೈಕಿ ಪರಿಶಿಷ್ಟ ಜಾತಿ ಮತ್ತು ಜನಾಂಗದವರ ನ್ಯಾಯಬೆಲೆ ಅಂಗಡಿಗಳೆಷ್ಟು ?

ಇ) ಪರಿಶಿಷ್ಟ ಜಾತಿ ಮತ್ತು ಜನಾಂಗದವರ ನಿರುದ್ಯೋಗಿ ಪದವೀಧರರಿಗೆ ನ್ಯಾಯಬೆಲೆ ಅಂಗಡಿ ತೆರೆಯಲು ಸರ್ಕಾರವು ಏನಾದರೂ ಯೋಜನೆ ಹಾಕಿಕೊಂಡಿದೆಯೆ ?

ಶ್ರೀ ಅಬ್ದುಲ್ ನಜೀರ್ ಸಾಬ್ (ಆಹಾರ ಮತ್ತು ನಾಗರೀಕ ಸರಬರಾಜು ರಾಜ್ಯ ಮಂತ್ರಿಗಳು).—

ಅ) ೧೨೯೪.

ಆ) ೯೪.

ಇ) ಪರಿಶೀಲಿಸಲಾಗುತ್ತಿದೆ.

ರಾಜ್ಯದ ಆರೋಗ್ಯ ಇಲಾಖೆಯಲ್ಲಿ ವಿಲೇವಾರಿಯಾಗದೆ ಇರುವ ಕಡತಗಳು

೧೫೫೭. ಶ್ರೀ ಕಲ್ಯಾಣರಾವ್ ಪೊಳಕೇರಿ (ಭಾಲ್ಕಿ).—ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ:

ಅ) ರಾಜ್ಯದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶನಾಲಯದಲ್ಲಿ ಎಷ್ಟು ಕಡತಗಳು ವಿಲೇವಾರಿಯಾಗದೆ ಹಲವು ವರ್ಷಗಳಿಂದ ಉಳಿದಿವೆ?

ಆ) ಹಾಗಿದ್ದಲ್ಲಿ ಈ ಕಡತಗಳನ್ನು ವಿಲೇವಾರಿ ಮಾಡಲು ತೆಗೆದುಕೊಂಡ ಕ್ರಮವೇನು?

ಇ) ಡಿಪಿಎಆರ್ ರವರು ಆರೋಗ್ಯ ನಿರ್ದೇಶನಾಲಯಕ್ಕೆ ಭೇಟಿ ನೀಡಿದ ಬಳಿಕ ಏನು ಕ್ರಮ ಕೈಗೊಂಡಿದ್ದಾರೆ?

ಶ್ರೀ ಬಿ. ರಾಚಯ್ಯ (ಆರೋಗ್ಯ ಸಚಿವರು).—

ಅ) ಒಟ್ಟು ೧೧೨೨೭

ಆ) ಪ್ರತಿ ತಿಂಗಳು ಕೊನೆಯ ವಾರದಲ್ಲಿ ಕಾರ್ಯನಿರ್ವಾಹಕರ ಕಡತಗಳ ತಪಾಸಣೆ ನಡೆಸಿ, ಬಾಕಿ ಇರುವ ಕಡತಗಳ ತ್ವರಿತ ವಿಲೇವಾರಿಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು.

ಇ) ಡಿಪಿಎಆರ್ ಅಧಿಕಾರಿಯವರು ತಪಾಸಣೆ ಮಾಡಿದ್ದ ಬಗ್ಗೆ ಇನ್ನೂ ವರದಿ ಸಲ್ಲಿಸಿಲ್ಲ. ಅದು ಬಂದ ನಂತರ ಅದರಲ್ಲಿ ಮಾಡುವ ಸಲಹೆಗಳ ಪ್ರಕಾರ ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು.